# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1293
ಸದಸ್ಯರ ಹೆಸರು : ಶ್ರೀ ಪ್ರಾಣೇಶ್ ಎಂ.ಕೆ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 29.12.2022.
ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಯವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಸಾರ್ವಜನಿಕ ಗ್ರಂಥಾಲಯ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಗ್ರಾಮೀಣ ಗ್ರಂಥಾಲಯಗಳಲ್ಲಿ ಗ್ರಂಥಪಾಲಕರಾಗಿ ಸೇವೆ ಸಲ್ಲಿಸುತ್ತಿರುವ ನೌಕರರುಗಳಿಗೆ ಕನಿಷ್ಠ ವೇತನ ಜಾರಿಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| (ಆ) | ಬಂದಿದ್ದಲ್ಲಿ, ಇವರುಗಳ ವೇತನವನ್ನು 4000 ಸಾವಿರದಿಂದ 12,000ಕ್ಕೆ ಹೆಚ್ಚಿಗೆ ಮಾಡಿದ್ದು, ಇವರುಗಳನ್ನು ಕನಿಷ್ಠ ವೇತನದ ವ್ಯಾಪ್ತಿಗೆ ಒಳಪಡಿಸುವ ಬಗ್ಗೆ ಯಾವುದೇ ಪ್ರಗತಿಕಾಣದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಕುರಿತು ಕೈಗೊಂಡ ಕ್ರಮಗಳೇನು; ಯಾವ ಕಾಲಮಿತಿಯಲ್ಲಿ ಇವರುಗಳನ್ನು ಕನಿಷ್ಠ ವೇತನದ ವ್ಯಾಪ್ತಿಗೆ ಒಳಪಡಿಸಲಾಗುವುದು? (ಸಂಪೂರ್ಣ ಮಾಹಿತಿ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ: ಆರ್.ಡಿ.ಪಿ.ಆರ್. 62 ಜಿಪಿಎಸ್ 2020, ದಿನಾಂಕ:26.05.2021 ರಲ್ಲಿ ಗ್ರಂಥಾಲಯ ಮೇಲ್ವಿಚಾರಕರುಗಳ ಸೇವಾ ಅವಧಿಯನ್ನು 4.00 ರಿಂದ 6.00 ಗಂಟೆಯವರೆಗೆ ಹೆಚ್ಚಿಸಿ ಅವರುಗಳ ಗೌರವಧನವನ್ನು ರೂ.7,000/- ಗಳಿಂದ ರೂ.12,000/- ರೂಗಳಿಗೆ ಹೆಚ್ಚಿಸಲಾಗಿದೆ. ಪ್ರಸ್ತುತ ಮಾಸಿಕವಾಗಿ ರೂ.12,000/- ಗಳ ಗೌರವಧನವನ್ನು ನೀಡಲಾಗುತ್ತಿದೆ.<br><br>ಗ್ರಾಮ ಪಂಚಾಯತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರದ ಮೇಲ್ವಿಚಾರಕರನ್ನು ಗೌರವ ಧನದ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗಿದ್ದು, ಮಾಸಿಕವಾಗಿ ಗೌರವಧನವನ್ನು ಪಾವತಿಸುತ್ತಿರುವುದರಿಂದ ಕನಿಷ್ಠ ವೇತನ ವ್ಯಾಪ್ತಿಗೆ ಒಳಪಡಿಸಲು ಅವಕಾಶವಿರುವುದಿಲ್ಲ. |

ಸಂ. ಗ್ರಾಅಪ 385 ಗ್ರಾಪಂಅ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ